ಅಂಬೇಡ್ಕರ್ ವಸತಿ ಯೋಜನೆಗೆ ಸಂಬಂಧಿಸಿದಂತೆ, ಅಂಬೇಡ್ಕರ್ ಮನೆಗಳಿಗೆ ಹಣ ಬಿಡುಗಡೆ ಮಾಡಲು ಯೋಜನೆಯ ನಿಯಮಾನುಸಾರ ದಾಖಲೆಗಳು ಪೂರ್ಣವಾಗಿರಬೇಕು. ಈ ದಾಖಲೆಗಳಲ್ಲಿ ನಮೂನೆ 2A - ಕರಾರು ಪತ್ರ ಮತ್ತು ನಮೂನೆ 3A - ಅಡಮಾನ ಪತ್ರ ಇವು ಸೇರಿವೆ. ನಮೂನೆ 3A ನ್ನು ಉಚಿತವಾಗಿ ನೋಂದಣಿ ಮಾಡಿಸಲಾಗುತ್ತಿದೆ. ಈ ದಾಖಲೆಗಳನ್ನು ಭರ್ತಿಮಾಡುವುದರಿಂದ ಮತ್ತು ನೋಂದಣಿ ಮಾಡುವುದರಿಂದ ಫಲಾನುಭವಿಗಳಿಗೆ ಮನೆಯ ಮಾಲೀಕತ್ವ ಖಚಿತವಾಗುವುದಲ್ಲದೇ ಅವರು ತಮ್ಮ ಸ್ವಂತ ಮನೆಯನ್ನು 15 ವರ್ಷಗಳ ಕಾಲ ಪರಭಾರೆ ಮಾಡದೇ, ಕಳೆದುಕೊಳ್ಳದೇ ಇರುವುದರಿಂದ ಮತ್ತು ನಿರ್ಗತಿಕರಾಗುವುದನ್ನು ಹಾಗೂ ಪದೇ ಪದೇ ವಸತಿಬೇಕೆಂದು ಬೇಡಿಕೆ ಸಲ್ಲಿಸುವುದನ್ನು ತಡೆಹಿಡಿಯಲು ಸಹಾಯಕವಾಗುತ್ತದೆ. ಹೀಗೆ ಫಲಾನುಭವಿಗಳ ಅನುಕೂಲಕ್ಕಾಗಿಯೇ ಈ ನಿಯಮಗಳನ್ನು ರೂಪಿಸಲಾಗಿದೆ.

ಅ) ಇಲ್ಲ

ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದಲ್ಲಿ ಒಂದು ಶಾಲೆಯಿಂದ ಮತ್ತೊಂದು ಶಾಲೆಗೆ ಇರುವ ಅಂತರದ ಉಲ್ಲಂಘನೆ

264 (116) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ರಹ್ಮಾವರ ವಿಧಾನಸಭಾ ಕ್ಷೇತ್ರದಲ್ಲಿ ಇರುವ ಖಾಸಗಿ ಪ್ರಾಥಮಿಕ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ;

ಆ) ನಿಯಮಾವಳಿಯಂತೆ ಒಂದು ಶಾಲೆಯಿಂದ ಇನ್ನೊಂದು ಶಾಲೆಗೆ ಇರಬೇಕಾಗಿರುವ ಅಂತರವೇನು ;

ಇ) ಎಷ್ಟು ಕಡೆ ನಿಯಮ ಉಲ್ಲಂಘಿಸಿ ಶಾಲೆಗಳಿಗೆ ಅನುಮತಿ ನೀಡಲಾಗಿದೆ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) 1. ಅನುದಾನಿತ ಕಿರಿಯ ಪ್ರಾಥಮಿಕ ಶಾಲೆಗಳು - 06

2. ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಗಳು - 72

3. ಅನುದಾನ ರಹಿತ ಕಿರಿಯ ಪ್ರಾಥಮಿಕ ಶಾಲೆಗಳು - 06

4. ಅನುದಾನ ರಹಿತ ಹಿರಿಯ ಪ್ರಾಥಮಿಕ ಶಾಲೆಗಳು - 06

ಆ) 1 ಕಿ.ಮೀ.

ಇ) ಇಲ್ಲ

ಬೆಂಗಳೂರು ನಗರದಲ್ಲಿ ನರ್ಸರಿ ಹಾಗೂ ಪ್ರಾಥಮಿಕ ಶಾಲೆಗಳ ಪ್ರವೇಶಕ್ಕೆ ಆಗುತ್ತಿರುವ ತೊಂದರೆ

266 (72) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಖಾಸಗಿ ಆಂಗ್ಲ ಮಾಧ್ಯಮ ನರ್ಸರಿ ಹಾಗೂ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ;

ಆ) ಈ ಶಾಲೆಗಳಲ್ಲಿ ಪ್ರವೇಶ ಪ್ರಕ್ರಿಯೆಯನ್ನು ಏಪ್ರಿಲ್ ತಿಂಗಳಲ್ಲಿ ಪ್ರಾರಂಭಿಸಬೇಕೆಂದು ಸರ್ಕಾರ ಆದೇಶಿಸಿದೆಯೇ ;

ಇ) ಹಾಗಿದ್ದಲ್ಲಿ, ಸರ್ಕಾರಿ ಆದೇಶವನ್ನು ಮೀರಿ, ಈ ಶಾಲೆಗಳಲ್ಲಿ ಈಗಾಗಲೇ ವಂತಿಗೆ ಪಡೆದು ಶ್ರೀಮಂತರಿಗೆ ಸೀಟುಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಇಂತಹ ಶಾಲೆಗಳ ಮೇಲೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು)

ಅ) ಬೆಂಗಳೂರು ನಗರದಲ್ಲಿ ಖಾಸಗಿ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಗಳ ಸಂಖ್ಯೆ 978

ನರ್ಸರಿ ಶಿಕ್ಷಣವು ಕಡ್ಡಾಯ ಶಿಕ್ಷಣ ಕಾಯಿದೆಯಡಿ ಬರುವುದಿಲ್ಲ.

ಆ) ಹೌದು, ಈ ಬಗ್ಗೆ ಎಲ್ಲಾ ಶಾಲೆಗಳಿಗೆ ದಿನಾಂಕ 8.11.99 ರಂದು ಜಿಲ್ಲಾ ಉಪನಿರ್ದೇಶಕರು ಸುತ್ತೋಲೆಯನ್ನು ಹೊರಡಿಸಿರುತ್ತಾರೆ.

ಇ) ಇಲ್ಲ

ಈ) ಕರ್ನಾಟಕ ಶಿಕ್ಷಣ ಕಾಯ್ದೆ 1983 ರಡಿಯಲ್ಲಿ ದಾಖಲಾತಿ ನಿಯಮಗಳನ್ನು ಉಲ್ಲಂಘಿಸಿರುವುದು ಕಂಡು ಬಂದಲ್ಲಿ ಅಂತಹ ಶಾಲಾ ಆಡಳಿತ ಮಂಡಳಿಯ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿ ಅನುದಾನ ಪಡೆಯುತ್ತಿರುವ ಶಾಲೆಗಳಿಗೆ ಅನುದಾನ ನಿಲ್ಲಿಸುವುದು

267 (74) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅನುದಾನ ಪಡೆಯುತ್ತಿರುವ ಖಾಸಗಿ ಪ್ರೈಮರಿ ಹಾಗೂ ಪ್ರೌಢ ಶಾಲೆಗಳೆಷ್ಟು; ಹಾಗೂ ಇವುಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ;

ಆ) ಅನುದಾನ ಪಡೆಯುತ್ತಿರುವ ಈ ಶಾಲೆಗಳಿಗೆ ಅನುದಾನವನ್ನು ನಿಲ್ಲಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ)

	ಶಾಲೆಗಳ ಸಂಖ್ಯೆ	ಕೆಲಸ ಮಾಡುತ್ತಿರುವ ಶಿಕ್ಷಕರ ಸಂಖ್ಯೆ
1) ಪ್ರಾಥಮಿಕ ಶಾಲೆಗಳು	2,422	16,267
2) ಪ್ರೌಢ ಶಾಲೆಗಳು	2,524	25,357

ಆ) ಸದ್ಯಕ್ಕೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ರಾಜ್ಯದಲ್ಲಿ ಹೋಮಿಯೋಪತಿ ಔಷಧ ಪರೀಕ್ಷಕರ ಹುದ್ದೆ ಭರ್ತಿ ಮಾಡುವುದು

268 (76) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) - ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ

ಅ) ರಾಜ್ಯದಲ್ಲಿ ಹೋಮಿಯೋಪತಿ ಔಷಧ ತಯಾರಿಕಾ ಘಟಕಗಳ ಸಂಖ್ಯೆ ಎಷ್ಟು;

ಆ) ಈ ಹೋಮಿಯೋಪತಿ ಔಷಧ ತಯಾರಿಕಾ ಘಟಕಗಳು ಉತ್ತಮ ದರ್ಜೆಯ ಔಷಧಿಗಳನ್ನು ತಯಾರಿಸುತ್ತಿವೆಯೇ ;